**<u>ಮಧ್ಯಂತರ ಅರ್ಜಿಯ ಆದೇಶದ ಮೇರಗೆ ದಿನಾಂಕಃ 13-03-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಎಂ.ಎಂ.ಬಿ ವಕೀಲರಿಂದಃ</u>**

**ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ ಎಂದು ನುಡಿದಿರುತ್ತಾರೆ. ಸದರಿ ಸಾಕ್ಷಿಯನ್ನು ಪಿ.ಡಬ್ಲೂ-1 ಎಂದು ಪರಿಗಣಿಸಲಾಯಿತು.**

ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ತಹಶೀಲ್ದಾರ ಸುರಪುರ ಇವರು ಆದೇಶದ ಪ್ರತಿಯನ್ನು ಹಾಜರುಪಡಿಸಿರುತ್ತೇನೆ ಅದನ್ನು ನಿಪಿ-13 ಎಂದು ಗುರುತಿಸಲಾಯಿತು. ದಾವೆಯಲ್ಲಿ ಕೋರಿದಂತೆ ಡಿಕ್ರಿ ಮಾಡಬೇಕಾಗಿ ವಿಂನತಿ.

**<u>ಪಾಟೀ ಸವಾಲುಃ 1 ಮತ್ತು 2 ನೇ ಪ್ರತಿವಾದಿ ಪರ ಶ್ರೀ ಬಿ.ಡಿ.ಎ ವಕೀಲರಿಂದಃ</u>**

ತಹಶೀಲ್ದಾರ ಸುರಪುರ ಇವರು ಮಾಡಿರುವ ಆದೇಶದಲ್ಲಿ ದಾವಾ ಆಸ್ತಿಯು 1 ನೇ ಪ್ರತಿವಾದಿಯ ಹೆಸರಿನಲ್ಲಿ ಇರುತ್ತದೆ. 1 ನೇ ಪ್ರತಿವಾದಿಯು ತನ್ನ ಮಕ್ಕಳ ಹೆಸರಿನಲ್ಲಿ ವಾಟಣಿ ಮಾಡಲು ಅರ್ಜಿ ಕೊಟ್ಟಿದ್ದನು, ಅದಕ್ಕೆ ನಾನು ತಕರಾರು ಸಲ್ಲಿಸಿದೆನು, ನ್ಯಾಯಾಲಯದಲ್ಲಿ ಪ್ರಕರಣ ಚಾಲ್ತಿ ಇರುವುದರಿಂದ ಅಂತಿಮ ಆದೇಶವಾಗುವವರೆಗೆ ಪ್ರಕರಣವನ್ನು ಮುಂದೂಡುತ್ತೇನೆ ಎಂದು ಆದೇಶ ಮಾಡಿದ್ದು ಇರುತ್ತದೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ 3 ರಿಂದ 6 ನೇ ಪ್ರತಿವಾದಿಯರು ಪ್ರತಿವಾದ ಪತ್ರ ಸಲ್ಲಿಸದೇ ಇರುವುದರಿಂದ ಸದರಿಯವರ ಪರವಾಗಿ ಪಾಟೀ ಸವಾಲು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.</u>**

**<u>(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)</u>**

ಓ. ಹೇ.ಕೇ. ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು,
ಶೋರಾಪುರ.